/541399/2024

ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560012

ಇ-ಮೇಲ್:commissioner.pue@gmail.com ಸ್ಥಿರದೂರವಾಣಿಸಂ:080-23562033

ಸಂಖ್ಯೆ:1294669 DPUE-EST10SEN/1/2024

ದಿನಾಂಕ: 17-01-2024

## ಜ್ಞಾಪನ

ವಿಷಯ: ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ)ಯ ದಿನಾಂಕ:01.05.1998 ರಿಂದ 12.04.2012ರ ಅವಧಿಯ ಉಪನ್ಯಾಸಕರ ವೃಂದದ ಪರಿಷ್ಕೃತ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

ಉಲ್ಲೇಖ: ಈ ಕಚೇರಿಯ ಜ್ಞಾಪನ ಸಂಖ್ಯೆ: ಪಪೂಶಿಇ/ಆಡಳಿತ-ಎ/ಉಜೇಪ/2017-18, ದಿನಾಂಕ:04.01.2021.

*****

ಉಲ್ಲೇಖ-1ರ ಈ ಕಚೇರಿಯ ಜ್ಞಾಪನದಲ್ಲಿ, ಕರ್ನಾಟಕ (ರಾಜ್ಯದ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ) ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮವಾದ ಜೇಷ್ಠತೆಯನ್ನು ವಿಸ್ತರಿಸುವ ಅಧಿನಿಯಮ 2017ರ ಅಧಿಸೂಚನೆಗಳಲ್ಲಿ ವಿವರಿಸಿರುವಂತೆ ಇಲಾಖೆಯಲ್ಲಿನ 1998 ರಿಂದ 2011ರ ವರೆಗೆ ನೇರ ನೇಮಕಾತಿ ಹಾಗೂ ಬಡ್ತಿ ಹೊಂದಿದ ಶಾಲಾ ಶಿಕ್ಷಣ ಇಲಾಖೆ (ಸರ್ಕಾರಿ ಪದವಿ ಪೂರ್ವ ಕಾಲೇಜುಗಳ) ಉಪನ್ಯಾಸಕರ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿತ್ತು. ಸದರಿ ತಾತ್ಕಾಲಿಕ ಜೇಷ್ಠತಾ ಪಟ್ಟಿಗೆ ಆಕ್ಷೇಪಣೆಗಳನ್ನು ದಿನಾಂಕ:04.11.2021ರೊಳಗಾಗಿ ಸಲ್ಲಿಸುವಂತೆ ಸೂಚಿಸಲಾಗಿತ್ತು. ಪ್ರಕಟಿಸಲಾಗಿದ್ದ ತಾತ್ಕಾಲಿಕ ಜೇಷ್ಠತಾ ಪಟ್ಟಿಗೆ ಸ್ವೀಕೃತವಾದ ಎಲ್ಲಾ ರೀತಿಯ ಅಂದರೆ, ನೇರ ನೇಮಕಾತಿ-ಬಡ್ತಿ ಕೋಟಾದ ವಿಷಯವಾಗಿ ಮತ್ತು ದಿನಾಂಕಗಳ ವ್ಯತ್ಯಾಸವನ್ನು ಸರಿಪಡಿಸಲು ಕೋರಿ ಹಾಗೂ ಮುಂತಾದ ಇತರ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಿ, ಅರ್ಹವಾದವುಗಳನ್ನು ಸರಿಪಡಿಸಲಾಗಿದೆ.

ಈ ರೀತಿ ಸರಿಪಡಿಸಲಾಗಿರುವ, ದಿನಾಂಕ:01-05-1998 ರಿಂದ 12-04-2012ರ ವರೆಗೆ ನೇರ ನೇಮಕಾತಿ ಹಾಗೂ ಬಡ್ತಿ ಹೊಂದಿದ ಶಾಲಾ ಶಿಕ್ಷಣ ಇಲಾಖೆ (ಸರ್ಕಾರಿ ಪದವಿ ಪೂರ್ವ ಕಾಲೇಜುಗಳ) ಉಪನ್ಯಾಸಕರ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪರಿಷ್ಕೃತ ಅನುಬಂಧದಲ್ಲಿರುವಂತೆ ಈ ಮೂಲಕ ಎಲ್ಲಾ ಉಪನ್ಯಾಸಕರುಗಳ ಮಾಹಿತಿಗಾಗಿ ಸಾಮಾನ್ಯ ಪಟ್ಟಿಯನ್ನು **ಅನುಬಂಧ-1ರಲ್ಲಿ, ಉಳಿಕೆ ಮೂಲ ವೃಂದದ ಪಟ್ಟಿಯನ್ನು ಅನುಬಂಧ-2ರಲ್ಲಿ ಮತ್ತು ಕಲ್ಯಾಣ ಕರ್ನಾಟಕ (ಸ್ಥಳೀಯ ವೃಂದ) ಪಟ್ಟಿಯನ್ನು ಅನುಬಂಧ-3ರಲ್ಲಿ** ಪುನರ್ ಪ್ರಕಟ್ಟಿಸಲಾಗಿದೆ.

ಸದರಿ ತಾತ್ಕಾಲಿಕ ಜೇಷ್ಠತಾ ಪಟ್ಟಿ ಕುರಿತು ಏನೇ ಆಕ್ಷೇಪಣೆಗಳಿದ್ದಲ್ಲಿ ಜೇಷ್ಠತಾ ಪಟ್ಟಿ ಪ್ರಕಟಿಸಿದ ದಿನಾಂಕದಿಂದ 10 ದಿನಗಳ ಅವಧಿಯೊಳಗಾಗಿ ಅಂದರೆ, ದಿನಾಂಕ: 31.01.2024ರೊಳಗಾಗಿ ತಮ್ಮ ಆಕ್ಷೇಪಣೆಯನ್ನು ಪೂರಕ ದಾಖಲಾತಿಗಳೊಂದಿಗೆ (ಸಮುಚಿತ ಮಾರ್ಗದ ಮೂಲಕ) ಸಂಬಂಧಿಸಿದ ಪ್ರಾಚಾರ್ಯರಿಂದ ದೃಢೀಕರಿಸಿ ಆಯಾ ಜಿಲ್ಲಾ ಉಪ ನಿರ್ದೇಶಕರ ಮೂಲಕ ಜಂಟಿ ನಿರ್ದೇಶಕರು(ಆಡಳಿತ) , ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) , ಬೆಂಗಳೂರು, ಇವರಿಗೆ ಸಲ್ಲಿಸಬಹುದಾಗಿರುತ್ತದೆ. ಸಮುಚಿತ ಮಾರ್ಗದಲ್ಲಿ ಸಲ್ಲಿಸದೆ, ನೇರವಾಗಿ ಸಲ್ಲಿಸುವ ಯಾವುದೇ ರೀತಿಯ ಆಕ್ಷೇಪಣೆಗಳನ್ನು

ಪರಿಗಣಿಸದೇ ತಿರಸ್ಕರಿಲಾಗುವುದು. ನಿಗದಿತ ಅವಧಿಯ ನಂತರ ಸ್ವೀಕೃತವಾದ ನಂತರ ಆಕ್ಷೇಪಣೆ/ಸಲಹೆಗಳನ್ನು ಸ್ವೀಕರಿಸಲಾಗುವುದಿಲ್ಲ.

Signed by
Sindhu B Rupesh
Date: 17-01-2024 13:16:34
ನಿರ್ದೇಶಕರು,
ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ).

ಇವರಿಗೆ,

1. ದಿನಾಂಕ:01-05-1998 ರಿಂದ 12-04-2012ರ ವರೆಗೆ ನೇರ ನೇಮಕಾತಿ ಹಾಗೂ ಬಡ್ತಿ ಹೊಂದಿದಶಾಲಾ ಶಿಕ್ಷಣ ಇಲಾಖೆ (ಸರ್ಕಾರಿ ಪದವಿ ಪೂರ್ವ ಕಾಲೇಜುಗಳ) ಉಪನ್ಯಾಸಕರುಗಳಿಗೆ.

ಪ್ರತಿಗಳು:

1. ನಿರ್ದೇಶಕರು, ಜಂಟಿ ನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ). ಇವರ ಆಪ್ತ ಶಾಖೆಗೆ.
2. ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ – ಸ್ವೀಕೃತಗೊಂಡ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಿ, ಕ್ರೋಢೀಕರಿಸಿ ಕೇಂದ್ರ ಕಚೇರಿಗೆ ಸಲ್ಲಿಸುವುದು.
3. ಸಹಾಯಕ ನಿರ್ದೇಶಕರು (ಇ-ಆಡಳಿತ)-ಇಲಾಖಾ ಜಾಲತಾಣದಲ್ಲಿ ಪ್ರಕಟಿಸಲು ಹಾಗೂ ಎಲ್ಲಾ ಜಿಲ್ಲಾ ಉಪ ನಿರ್ದೇಶಕರ ಕಚೇರಿಗೆ ಇ-ಮೇಲ್ ಕಳುಹಿಸುವುದು.
4. ಶಾಲಾ ಶಿಕ್ಷಣ ಇಲಾಖೆ (ಸರ್ಕಾರಿ ಪದವಿ ಪೂರ್ವ ಕಾಲೇಜಿನ) ಪ್ರಾಚಾರ್ಯರುಗಳಿಗೆ. - ತಮ್ಮ ಕಾಲೇಜಿನ ಉಪನ್ಯಾಸಕರುಗಳ ಆಕ್ಷೇಪಣೆ ಇದ್ದಲ್ಲಿ ನಿಯಮಾನುಸಾರ ಪರಿಶೀಲಿಸಿ, ದೃಢೀಕರಿಸಿ ತಮ್ಮ ಜಿಲ್ಲೆಯ ಜಿಲ್ಲಾ ಉಪನಿರ್ದೇಶಕರಿಗೆ ಸಲ್ಲಿಸುವುದು.
5. ಕಚೇರಿ ಪ್ರತಿ.